# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1090 |
| ಸದಸ್ಯರ ಹೆಸರು | ಶ್ರೀಮತಿ ಎಸ್.ವೀಣಾ ಅಚ್ಚಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 21.09.2021. |
| ಉತ್ತರಿಸುವ ಸಚಿವರು | ಗಣಿ ಮತ್ತು ಭೂವಿಜ್ಞಾನ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಮತ್ತು ವಿಕಲಚೇತನರ, ಹಿರಿಯ ನಾಗರಿಕರ ಸಬಲೀಕರಣ ಸಚಿವರು. |

| ಕ್ರ. ಸಂ. | ಪ್ರಶ್ನೆಗಳು | ಉತ್ತರ |
|---|---|---|
| ಅ. | ಕೊಡಗು ಜಿಲ್ಲೆಯಲ್ಲಿ ಬೇಡಿಕೆಗನುಗುಣವಾಗಿ ಮರಳು ದೊರೆಯದೆ, ನಿರ್ಮಾಣ ಕಾಮಗಾರಿಗಳಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | • ಕೊಡಗು ಜಿಲ್ಲೆಯಲ್ಲಿ ಟೆಂಡರ್-ಕಂ-ಹರಾಜು ಮೂಲಕ ನದಿ ಪಾತ್ರದ 17 ಮರಳು ಬ್ಲಾಕ್‌ಗಳಿಗೆ ಗುತ್ತಿಗೆಗಳನ್ನು ಮಂಜೂರು ಮಾಡಲಾಗಿದ್ದು, ಸದರಿ ಗುತ್ತಿಗೆ ಪ್ರದೇಶಗಳಿಂದ ಜಿಲ್ಲೆಯ ಸಾರ್ವಜನಿಕ ಹಾಗೂ ಸರ್ಕಾರಿ ಕಾಮಗಾರಿಗಳಿಗೆ ಮರಳು ಪೂರೈಕೆಯಾಗುತ್ತಿರುತ್ತದೆ.<br>• ಕೊಡಗು ಜಿಲ್ಲಾ ವ್ಯಾಪ್ತಿಯಲ್ಲಿ 04 ಕ್ರಷರ್ ಘಟಕಗಳಲ್ಲಿ ಎಂ-ಸ್ಯಾಂಡ್‌ನ್ನು ಉತ್ಪಾದಿಸಿ, ಜಿಲ್ಲೆಯ ಸಾರ್ವಜನಿಕ ಹಾಗೂ ಸರ್ಕಾರಿ ಕಾಮಗಾರಿಗಳಿಗೆ ಪೂರೈಸಲಾಗುತ್ತಿದೆ.<br>• ಅಲ್ಲದೆ, ಕೊಡಗು ಜಿಲ್ಲೆಗೆ ಹಾಸನ ಮತ್ತು ಮೈಸೂರು ಜಿಲ್ಲೆಗಳಿಂದ ಎಂ-ಸ್ಯಾಂಡ್ ಪೂರೈಕೆಯಾಗುತ್ತಿರುತ್ತದೆ.<br>• ಮೇಲ್ಕಂಡಂತೆ, ಕೊಡಗು ಜಿಲ್ಲೆಗೆ ಬೇಡಿಕೆಗನುಸಾರ ಮರಳು ಪೂರೈಕೆ ಆಗುತ್ತಿರುವುದರಿಂದ, ಜಿಲ್ಲೆಯ ಸಾರ್ವಜನಿಕ ಹಾಗೂ ಸರ್ಕಾರಿ ನಿರ್ಮಾಣ ಕಾಮಗಾರಿಗಳಿಗೆ ಮರಳಿನ ಕೊರತೆ ಉಂಟಾಗಿರುವುದು ಕಂಡು ಬಂದಿರುವುದಿಲ್ಲ. |
| ಆ. | ಬಂದಿದ್ದಲ್ಲಿ, ಹೊಳೆಯಿಂದ ಮರಳು ತೆಗೆದು ನಿರ್ಮಾಣ ಕಾಮಗಾರಿಗಳಿಗೆ ದೊರೆಯುವಂತೆ ಮಾಡಲು ಸರ್ಕಾರ ಕ್ರಮ ಕೈಗೊಂಡಿದೆಯೇ; | ಕೊಡಗು ಜಿಲ್ಲೆಯ ಸಾರ್ವಜನಿಕ ಹಾಗೂ ಸರ್ಕಾರಿ ನಿರ್ಮಾಣ ಕಾಮಗಾರಿಗಳಿಗೆ ಬೇಡಿಕೆಗನುಸಾರ ಮರಳು ಪೂರೈಕೆಯಾಗುತ್ತಿರುತ್ತದೆ.<br>ಆದ್ದರಿಂದ, ಕೊಡಗು ಜಿಲ್ಲಾ ವ್ಯಾಪ್ತಿಯ ಸಾರ್ವಜನಿಕ ಹಾಗೂ ಸರ್ಕಾರಿ ನಿರ್ಮಾಣ ಕಾಮಗಾರಿಗಳಿಗೆ ಮರಳು ಕೊರತೆಯ ಪ್ರಶ್ನೆ ಉದ್ಭವಿಸುವುದಿಲ್ಲ. |

| | | |
|---|---|---|
| ಇ. | ಕ್ರಮ ಕೈಗೊಂಡಿದ್ದಲ್ಲಿ, ಜಿಲ್ಲೆಯಲ್ಲಿನ ನಿರ್ಮಾಣ ಕಾಮಗಾರಿಗಳಿಗೆ ಬೇಡಿಕೆಗೆ ಅನುಗುಣವಾಗಿ ಮರಳು ದೊರೆಯುತ್ತಿದೆಯೇ? (ವಿವರ ನೀಡುವುದು) | ಕೊಡಗು ಜಿಲ್ಲೆಯಲ್ಲಿ ಪ್ರಸ್ತುತ 17 ನದಿ ಪಾತ್ರದ ಮರಳು ಗುತ್ತಿಗೆ ಪ್ರದೇಶಗಳಿಂದ ಮರಳು ಹಾಗೂ 04 ಕ್ರಷರ್ ಘಟಕಗಳಿಂದ ಎಂ-ಸ್ಯಾಂಡ್ ಪೂರೈಕೆಯಾಗುತ್ತಿರುತ್ತದೆ.<br><br>ಮುಂದುವರೆದು, ಪಕ್ಕದ ಮೈಸೂರು ಮತ್ತು ಹಾಸನ ಜಿಲ್ಲೆಗಳಿಂದ ನಿರ್ಮಾಣ ಕಾಮಗಾರಿಗಳಿಗೆ ಎಂ-ಸ್ಯಾಂಡ್ ಪೂರೈಕೆಯಾಗುತ್ತಿರುತ್ತದೆ.<br><br>ಆದ್ದರಿಂದ, ಕೊಡಗು ಜಿಲ್ಲಾ ವ್ಯಾಪ್ತಿಯ ಸಾರ್ವಜನಿಕ ಹಾಗೂ ಸರ್ಕಾರಿ ನಿರ್ಮಾಣ ಕಾಮಗಾರಿಗಳಿಗೆ ಮರಳು ಕೊರತೆಯ ಪ್ರಶ್ನೆ ಉದ್ಭವಿಸುವುದಿಲ್ಲ. |

ಸಂಖ್ಯೆ ಸಿಐ 485 ಎಂಎಂಎನ್ 2021

(ಆಚಾರ್ ಹಾಲಪ್ಪ ಬಸಪ್ಪ)
ಗಣಿ ಮತ್ತು ಭೂವಿಜ್ಞಾನ ಹಾಗೂ
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಮತ್ತು
ವಿಕಲಚೇತನರ, ಹಿರಿಯ ನಾಗರಿಕರ
ಸಬಲೀಕರಣ ಸಚಿವರು.